ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ    ದಿನಾಂಕ : DATE : 13/07/2019

# ಸಂವಿಧಾನ, ಕಾನೂನಿಗೆ ಅಪಚಾರವೆಸಗುವುದಿಲ್ಲ

**ಬೆಂಗಳೂರು:** ನಾನು ಸಂವಿಧಾನದಡಿ ನೇಮಕಗೊಂಡ ಪ್ರತಿನಿಧಿ. ನನಗೆ ಸಂವಿಧಾನವೇ ಮುಖ್ಯ. ಸಂವಿಧಾನ, ಕಾನೂನಿಗೆ ಅಪಚಾರವೆಸಗುವುದಿಲ್ಲ ಎಂದು ಸ್ಪೀಕರ್ ರಮೇಶ್ ಕುಮಾರ್ ಖಡಕ್ಕಾಗಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಜನರ ನೋವಿಗೆ ಗೌರವ ಕೊಡುವುದು ನನ್ನ ಆದ್ಯ ಕರ್ತವ್ಯ. ಆದರಿಂದ ನಾನು ವಿಮುಖನಾಗುವುದಿಲ್ಲ, ಸಂವಿಧಾನದಲ್ಲಿ ಹೇಳಿರುವ ನಿಯಮಗಳಿಗೆ ನಾನು ಅಪಚಾರ ಮಾಡುವುದಿಲ್ಲ. ಸಂವಿಧಾನದ ಮೇಲೆ ಅತ್ಯಾಚಾರ ಮಾಡುವುದಿಲ್ಲ. ಯಾರನ್ನಾದರೂ ಖುಷಿಪಡಿಸಲು ಅಥವಾ ಅಸಂತೋಷಪಡಿಸುವುದಕ್ಕೆ ನಾನು ಸಿದ್ಧನಿಲ್ಲ. ಯಾರಾದರೂ ಹೇಳಿದ ರೀತಿ ನೃತ್ಯ ಮಾಡಲು ನಾನು ನೃತ್ಯಗಾರನೂ ಅಲ್ಲ, ಸಂವಿಧಾನ ಮಾತ್ರ ನನಗೆ ಮುಖ್ಯ ಎಂದು ಹೇಳಿದ್ದಾರೆ.

ಶಾಸಕರು ಕ್ರಮಬದ್ಧವಾಗಿ ರಾಜೀನಾಮೆ ಸಲ್ಲಿಸದ ಕಾರಣ ಮತ್ತೊಮ್ಮೆ ಕ್ರಮಬದ್ಧವಾಗಿ ರಾಜೀನಾಮೆ ಸಲ್ಲಿಸಿದ್ದಾರೆ. ಅವರಿಗೆ ವಿವರಣೆ ನೀಡುವಂತೆ ಕ್ರಮಸಂಖ್ಯೆ ಪ್ರಕಾರ ದಿನಾಂಕ ಮತ್ತು ಸಮಯ ನೀಡಲಾಗಿದೆ. ಸುಪ್ರೀಂಕೋರ್ಟ್ ಯಾವ ತೀರ್ಪು ನೀಡುತ್ತದೆ ನೋಡೋಣ. ಅದರ ತೀರ್ಪನ್ನು ಪಾಲಿಸೋಣ. ತಪ್ಪು ತೀರ್ಪು ನೀಡಿದರೆ ಅದರ ಬಗ್ಗೆ ವಿವರಣೆ ಕೇಳೋಣ. ದೇಶದಲ್ಲಿ ಒಂದು ಸುಪ್ರೀಂಕೋರ್ಟ್ ಇರಬೇಕು, ದೇಶ ಉಳಿಯಬೇಕು, ಶಾಸಕಾಂಗ, ನ್ಯಾಯಾಂಗ ಕೂಡ ಉಳಿಯಬೇಕು ಎಂದು ಮಾರ್ಮಿಕವಾಗಿ ಹೇಳಿದರು.

## ಗಾಂಧಿ ಕೊಂದ ದೇಶವಿದು

ಕೈಮುಗಿಯುವ ಸೋಗಿನಲ್ಲಿ ಗಾಂಧೀಜಿಯನ್ನು ಕೊಂದ ದೇಶವಿದು, ಇನ್ನು ರಮೇಶ್ ಕುಮಾರ್ ಅವರನ್ನು ಬಿಡುತ್ತಾರಾ? ಗಾಂಧಿಯನ್ನು ಕೊಂದರೂ ಅವರ ತತ್ವವನ್ನು ಕೊಲ್ಲಲು ಯಾರಿಂದಲೂ ಸಾಧ್ಯವಾಗಿಲ್ಲ. ನಾನು ಗಾಂಧಿ ತತ್ವದಡಿ ಬದುಕುತ್ತಿರುವ ವ್ಯಕ್ತಿ. ನನ್ನ ವಿರುದ್ಧವೂ ಬಹಳ ದಿನಗಳಿಂದ ತೇಜೋವಧೆ ಮಾಡುವ ಕೆಲಸ ನಡೆಯುತ್ತಿದೆ ಎಂದು ಸ್ಪೀಕರ್ ರಮೇಶ್‌ಕುಮಾರ್ ಆರೋಪಿಸಿದರು.



2